


ದಿನಾಂಕ: 06-07-2023 ರಂದು ಹಸಿರು ಕ್ರಾಂತಿಯ ಹರಿಕಾರ ರಾಷ್ಟ್ರ ನಾಯಕ ಭಾರತದ ಮಾಜಿ ಉಪ ಪ್ರಧಾನಮಂತ್ರಿಗಳಾದ ಡಾ.ಬಾಬು ಜಗಜೀವನ್‌ರಾಮ್ ರವರ 37ನೇ ಪುಣ್ಯ ಸ್ಮರಣೆ ಅಂಗವಾಗಿ ವಿಧಾನಸೌಧ ಪಶ್ಚಿಮ ದ್ವಾರದ ಬಳಿ ಇರುವ ಡಾ.ಬಾಬು ಜಗಜೀವನ್ ರಾಮ್‌ರವರ ಪ್ರತಿಮೆಗೆ ಮಾನ್ಯ ಸಭಾಪತಿ ಶ್ರೀ ಬಸವರಾಜ ಎಸ್ ಹೊರಟ್ಟಿ ಅವರು ಮಾಲಾರ್ಪಣೆ ಸಲ್ಲಿಸಿದರು. ನಂತರ ಡಾ.ಬಾಬು ಜಗಜೀವನ್ ರಾಮ್ ರವರ ಕೆಲ ಚಿಂತನೆಗಳನ್ನು ಮೆಲಕು ಹಾಕಿದ ಅವರು ದೇಶದ ಪ್ರಗತಿಯಲ್ಲಿ ನಮ್ಮ ಪ್ರಗತಿಯಿದೆ. ಅದರ ಉದ್ಧಾರದಲ್ಲೇ ನಮ್ಮ ಉದ್ಧಾರವಿದೆ. ಅದರ ವಿಮೋಚನೆಯಲ್ಲೇ ನಮ್ಮ ವಿಮೋಚನೆ ಇದೆ" ಎಂಬ ಅವರ ಚಿಂತನೆಗಳನ್ನು ನಾವೆಲ್ಲ ಪಾಲಿಸುವುದು ಅವಶ್ಯವಿದೆ ಎಂದು ಹೇಳಿದರು.